**<u>ದಿನಾಂಕಃ 25.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು ವಾದಿ ಪರ ಶ್ರೀ. ಪಿ ಎಲ್ ಎನ್ ವಕೀಲರಿಂದಃ-</u>**

1. ವಾದಿ ಶಿವರಾಜೇಗೌಡ ಈ ದಾವೆಯನ್ನು ನ್ಯಾಯಾಲಯಕ್ಕೆ ಸಲ್ಲಿಸುವ ಪೂರ್ವದಲಿಲ ವಾದಿಯು ವಕೀಲರ ಮೂಲಕ ಕಳುಹಿಸಿದ ನೋಟೀಸ್ ನಿಪಿ-8 ರಂತೆ ಪಡೆದಿದ್ದೇನೆ ಎಂದರೆ ಸರಿಯಲ್ಲ. ನಾನು 2009ರಲ್ಲೆ ನೋಟೀಸನ್ನು ಪಡೆದು ಸುಮ್ಮನಿದ್ದು ಈಗ ಉದ್ದೇಶ ಪೂರ್ವಕವಾಗಿ ನನಗೆ ಯಾವುದೇ ನೋಟೀಸ್ ಬಂದಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಬೆಲೆ ಪ್ರಸ್ತುತ ಗಗನಕ್ಕೇರಿದ್ದು ದಾವಾ ಆಸ್ತಿಯನ್ನು ಹೇಗಾದರೂ ಮಾಡಿ ವಾದಿಯಿಂದ ಪಡೆಯಬೇಕು ಎಂಬ ದುರುದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿ ನನ್ನ ತಂದೆಯ ಸ್ವಯಾರ್ಜಿತ ಆಸ್ತಿಯಾಗಿದ್ದು, ನನ್ನ ಮೂವರು ಸಹೋದರರು ಸೇರಿ 2004ರಲ್ಲೆ ವಾದಿ ಶಿವರಾಜೇಗೌಡರವರಿಗೆ ಕ್ರಯಕ್ಕೆ ಮಾರಾಟ ಮಾಡಿದ್ದಾರೆ ಎಂದರೆ ಸರಿಯಲ್ಲ.

**ಮರು ವಿಚಾರಣೆ:ಇಲ್ಲ**

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಣ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ
ನ್ಯಾಯಾಲಯ, ಚನ್ನಪಟ್ಟಣ